**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1233 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪಿ.ಹೆಚ್.ಪೂಜಾರ್ |
| ಉತ್ತರಿಸುವ ದಿನಾಂಕ | : | 13-03-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರವು 2025-26 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುವ ವಿದ್ಯಾರ್ಥಿ ನಿಲಯಗಳಲ್ಲಿ ನೀಡಲಾಗುತ್ತಿರುವ ಆಹಾರ ವ್ಯವಸ್ಥೆಯ ಬಗ್ಗೆ ಪಾರದರ್ಶಕತೆಯನ್ನು ತರಲು ಸಾಮಾಜಿಕ ಪರಿಶೋಧನೆ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದೆಂದು ಘೋಷಿಸಿದೆಯೇ; | ಹೌದು.<br>ಸರ್ಕಾರದ ಆದೇಶ ಸಂಖ್ಯೆ:ಸಕಇ 260 ಎಂಡಿಎಸ್ 2024, ದಿನಾಂಕ:06-01-2025ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲಾ/ಕಾಲೇಜುಗಳು ಮತ್ತು ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಮೆನು ಪ್ರಕಾರ ಸಕಾಲದಲ್ಲಿ ಊಟದ ಗುಣಮಟ್ಟ ಮತ್ತು ಸ್ಥಿರತೆಯ ಬಗ್ಗೆ ಪಾರದರ್ಶಕತೆ ಮತ್ತು ಸಾರ್ವಜನಿಕ ಜಾಗೃತಿಯನ್ನು ಖಚಿತಪಡಿಸಿಕೊಳ್ಳಲು ಬೆಳಗಿನ ಉಪಹಾರ, ಮಧ್ಯಾಹ್ನ ಮತ್ತು ರಾತ್ರಿ ಊಟದ ದೈನಂದಿನ ಫೋಟೋಗಳನ್ನು X (Formaly Twitter) ನಲ್ಲಿ Post ಮಾಡಲು ಮಾರ್ಗಸೂಚಿಗಳನ್ನು ದಿನಾಂಕ:25.10.2024 ರಂದು ಆದೇಶ ಹೊರಡಿಸಿ, ಪ್ರಾರಂಭವಾಗಿ 21 ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗಿರುತ್ತದೆ. ಮುಂದುವರೆದು, 21 ಜಿಲ್ಲೆಗಳ ಸಾಫಲ್ಯತೆಯನ್ನು ಕಂಡು ಉಳಿದ 10 ಜಿಲ್ಲೆಗಳಿಗೂ ವಿಸ್ತರಿಸಿ, ದಿನಪ್ರತಿ ಫೋಟೋ ವರದಿ ಪಡೆಯಲಾಗುತ್ತಿದೆ. |
| (ಆ) | ಅದರಂತೆ, ಸಾಮಾಜಿಕ ಪರಿಶೋಧನೆ ವ್ಯವಸ್ಥೆಯನ್ನು ಎಷ್ಟು ಜಿಲ್ಲೆಗಳಲ್ಲಿ ಜಾರಿಗೊಳಿಸಲಾಗಿದೆ; ಜಾರಿಗೊಳಿಸದೇ ಇರುವ ಜಿಲ್ಲೆಗಳು ಎಷ್ಟು; ಜಾರಿಗೊಳಿಸದೇ ಇರಲು ಕಾರಣಗಳು ಏನು? | |

**ಸಕಇ 249 ಪಕವಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**